**All India Radio: Bangalore**
**National Bulletin In Kannada**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**24.04.2026 19.35 hrs**

**<>><><*><><<>**

ಮುಖ್ಯಾಂಶಗಳು

**೧. ಪಶ್ಚಿಮ ಬಂಗಾಳದಲ್ಲಿ ಎರಡನೇ ಹಂತದ ಚುನಾವಣೆಗೆ ಬಿರುಸುಗೊಂಡ ಪ್ರಚಾರ; ಪ್ರಧಾನಿ ನರೇಂದ್ರ ಮೋದಿ, ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಮತಯಾಚನೆ**

**೨. ಆಮ್ ಆದ್ಮಿ ರಾಜ್ಯಸಭಾ ಸದಸ್ಯತ್ವಕ್ಕೆ ರಾಘವ್ ಚಡ್ಡಾ, ಸಂದೀಪ್ ಪಾಟಕ್, ಅಶೋಕ್ ಮಿತ್ತಲ್ ರಾಜೀನಾಮೆ; ಬಿಜೆಪಿ ಸೇರಲು ನಿರ್ಧಾರ**

**೩. ಬ್ಯಾಂಕಿಂಗ್ ಕ್ಷೇತ್ರದಲ್ಲಿ ಕೃತಕಬುದ್ಧಿಮತ್ತೆ, ಡಿಜಿಟಲ್ ಆರ್ಥಿಕತೆಯಲ್ಲಿ ಮಹತ್ವದ ಪರಿವರ್ತನೆ- ಸಚಿವೆ ನಿರ್ಮಲಾ ಸೀತಾರಾಮನ್**

**೪. ಐಪಿಎಲ್ ಟಿ-೨೦ ಕ್ರಿಕೆಟ್; ಗುಜರಾತ್ ಟೈಟಾನ್ಸ್ ವಿರುದ್ಧ ಟಾಸ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು, ಫೀಲ್ಡಿಂಗ್ ಆಯ್ಕೆ**

**<>><><*><><<>**

ಪಶ್ಚಿಮ ಬಂಗಾಳದಲ್ಲಿ ಬದಲಾವಣೆ ಸನ್ನಿಹಿತವಾಗಿದೆ ಎಂದು ಬಿಜೆಪಿ ಹಿರಿಯ ನಾಯಕ, ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಭೈರುಪುರ್‌ನ ದಕ್ಷಿಣ ೨೪ ಪರಗಣ ಜಿಲ್ಲೆಯಲ್ಲಿ ಚುನಾವಣಾ ಪ್ರಚಾರ ಭಾಷಣ ಮಾಡಿದ ಅವರು, ಮೊದಲ ಹಂತದ ಚುನಾವಣೆಯಲ್ಲಿ ಆಡಳಿತರೂಢ ತೃಣಮೂಲ ಕಾಂಗ್ರೆಸ್ ಪಕ್ಷಕ್ಕೆ ಹಿನ್ನೆಡೆಯಾಗಿದೆ. ಹೀಗಾಗಿ ಎರಡನೇ ಹಂತದಲ್ಲಿ ಪಶ್ಚಿಮ ಬಂಗಾಳವನ್ನು ಸಮರ್ಪಕವಾಗಿ ನಿರ್ಮಾಣ ಮಾಡಲು ಬಿಜೆಪಿಯನ್ನು ಬೆಂಬಲಿಸುವಂತೆ ಮನವಿ ಮಾಡಿದ್ದಾರೆ. ಪಶ್ಚಿಮ ಬಂಗಾಳದಲ್ಲಿ ರಾಜಕೀಯ ಬದಲಾವಣೆಯಿಂದ ಸುಧಾರಣೆ ಸಾಧ್ಯ. ರಾಜ್ಯದಲ್ಲಿ ಮಹಿಳೆಯರಿಗೆ ಸುರಕ್ಷತೆ ಇಲ್ಲ. ಹಿಂದುಳಿದ ವರ್ಗಗಳನ್ನು ನಿರ್ಲಕ್ಷಿಸಿದೆ. ಎಲ್ಲಾ ಸಮಸ್ಯೆಗಳಿಗೂ ಬಿಜೆಪಿಯೇ ಪರಿಹಾರವಾಗಿದೆ. ಭೈರುಪುರ್‌ನ ದಕ್ಷಿಣ ೨೪ ಪರಗಣದಲ್ಲಿ ’ಪ್ರಧಾನಮಂತ್ರಿ ಉಜ್ವಲ ಯೋಜನೆಯಡಿ’ ೧೧ ಲಕ್ಷ ಅಡುಗೆ ಅನಿಲ ಸಂಪರ್ಕ ಒದಗಿಸಲಾಗಿದೆ ಎಂದು ಪ್ರಧಾನಿ ಹೇಳಿದ್ದಾರೆ.

**<>><><*><><<>**

ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಸರ್ಕಾರ ರಚಿಸಲಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಉತ್ತರ ೨೪ ಪರಗಣ ಜಿಲ್ಲೆಯ ಹಿಂಗಲ್‌ಗಂಜ್‌ನಲ್ಲಿ ಚುನಾವಣಾ ರ್‍ಯಾಲಿ ಉದ್ದೇಶಿಸಿ ಮಾತನಾಡಿದ ಅವರು, ಮೊದಲ ಹಂತದಲ್ಲಿ ೧೫೨ ಕ್ಷೇತ್ರಗಳಿಗೆ ಮತದಾನ ನಡೆದಿದ್ದು, ಈ ಪೈಕಿ ಬಿಜೆಪಿ, ೧೧೦ ಕ್ಷೇತ್ರಗಳಲ್ಲಿ ಗೆಲುವು ಸಾಧಿಸಲಿದೆ. ಭ್ರಷ್ಟಾಚಾರ, ದುರಾಡಳಿತ, ಮಹಿಳೆಯರ ಮೇಲಿನ ದೌರ್ಜನ್ಯದಿಂದ ಮತದಾರರು ಬೇಸತ್ತಿದ್ದು, ಬಿಜೆಪಿಯನ್ನು ಗೆಲ್ಲಿಸಲಿದ್ದಾರೆ ಎಂದು ಹೇಳಿದ್ದಾರೆ.

<>><><*><><<>

ಪಶ್ಚಿಮ ಬಂಗಾಳ ರಾಜ್ಯಕ್ಕೆ ಸೇರಿದ್ದ ಎರಡು ಲಕ್ಷ ಕೋಟಿ ರೂಪಾಯಿ ಮೊತ್ತವನ್ನು ಕೇಂದ್ರ ಸರ್ಕಾರ ತಡೆಹಿಡಿದಿದೆ ಎಂದು ತೃಣಮೂಲ ಕಾಂಗ್ರೆಸ್ ನಾಯಕಿ, ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಆರೋಪಿಸಿದ್ದಾರೆ. ಹೌರಾದಲ್ಲಿಂದು ಚುನಾವಣಾ ಪ್ರಚಾರ ಭಾಷಣ ಮಾಡಿದ ಅವರು, ಪಶ್ಚಿಮ ಬಂಗಾಳ ಸರ್ಕಾರ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದೆ. ಹಿಂದಿನ ಬಾರಿ ಬಿಜೆಪಿ ಗೆದ್ದಿದ್ದ ಸ್ಥಾನಗಳಲ್ಲಿ ಶೇಕಡ ೫೦ ರಷ್ಟು ಕಡಿಮೆಯಾಗಲಿವೆ ಎಂದರು. ಡಿಎಂಸಿ ಪ್ರಧಾನ ಕಾರ್ಯದರ್ಶಿ ಅಭಿಷೇಕ್ ಬ್ಯಾನರ್ಜಿ ಮಾತನಾಡಿ ರಾಜ್ಯದಲ್ಲಿ ದಾಖಲೆಯ ಪ್ರಮಾಣದಲ್ಲಿ ಕಲ್ಯಾಣ ಕಾರ್ಯಕ್ರಮಗಳನ್ನು ಜಾರಿಗೊಳಿಸಲಾಗಿದೆ. ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ರಾಜ್ಯವನ್ನು ನಿರ್ಲಕ್ಷಿಸಿದೆ ಎಂದು ಆಪಾದಿಸಿದ್ದಾರೆ.

<>><><*><><<>

ಪಶ್ಚಿಮ ಬಂಗಾಳದಲ್ಲಿ ಮೊದಲ ಹಂತದ ಚುನಾವಣೆಯಲ್ಲಿ ಈ ಬಾರಿ ದಾಖಲೆಯ ಪ್ರಮಾಣದಲ್ಲಿ ಮತದಾನವಾಗಿದ್ದು, ಇದು ನಿಜಕ್ಕೂ ಉತ್ತಮ ಬೆಳವಣಿಗೆ ಎಂದು ಕಾಂಗ್ರೆಸ್ ವಕ್ತಾರ ರಾಜೀವ್ ಶುಕ್ಲಾ ಹೇಳಿದ್ದಾರೆ. ಹೆಚ್ಚಿನ ಪ್ರಮಾಣದಲ್ಲಿ ಮತದಾರರು, ಮತದಾನದಲ್ಲಿ ಭಾಗವಹಿಸಿದ್ದು, ಎಲ್ಲಾ ರಾಜಕೀಯ ಪಕ್ಷಗಳು ಇದರಿಂದ ತಮಗೆ ರಾಜಕೀಯ ಲಾಭವಾಗುತ್ತಿದೆ ಎಂದು ಹೇಳಿಕೊಳ್ಳುತ್ತಿವೆ. ಆದರೆ, ಫಲಿತಾಂಶದ ನಂತರ ವಸ್ತುಸ್ಥಿತಿ ಮನವರಿಕೆಯಾಗಲಿದೆ ಎಂದು ಅವರು ತಿಳಿಸಿದ್ದಾರೆ.

<>><><*><><<>

ಮಹತ್ವದ ಬೆಳವಣಿಗೆಯಲ್ಲಿ ಆಮ್ ಆದ್ಮಿ ಪಕ್ಷದ ರಾಜ್ಯಸಭಾ ಸದಸ್ಯರಾದ ರಾಘವ್ ಚೆಡ್ಡಾ, ಸಂದೀಪ್ ಪಾಟಕ್ ಹಾಗೂ ಅಶೋಕ್ ಮಿತ್ತಲ್ ಅವರು ಪಕ್ಷ ತೊರೆಯುವುದಾಗಿ ಘೋಷಿಸಿದ್ದಾರೆ. ಶೀಘ್ರದಲ್ಲೇ ಬಿಜೆಪಿ ಸೇರ್ಪಡೆಯಾಗುವುದಾಗಿ ಅವರು ತಮ್ಮ ರಾಜಕೀಯ ನಿಲುವನ್ನು ಪ್ರಕಟಿಸಿದ್ದಾರೆ. ನವದೆಹಲಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ರಾಘವ್ ಚೆಡ್ಡಾ, ಸಂಸತ್ತಿನ ಮೇಲ್ಮನೆಯ ಇತರ ಹಲವು ಸದಸ್ಯರೊಂದಿಗೆ ಬಿಜೆಪಿಗೆ ಸೇರ್ಪಡೆಯಾಗಲು ನಿರ್ಧರಿಸಲಾಗಿದೆ. ಆಮ್ ಆದ್ಮಿ ಪಕ್ಷದ ಮೂರನೇ ಎರಡರಷ್ಟು ಸದಸ್ಯರು ಬಿಜೆಪಿಯೊಂದಿಗೆ

ವಿಲೀನಗೊಳ್ಳಲು ಬಯಸಿರುವುದಾಗಿ ಅವರು ತಿಳಿಸಿದ್ದಾರೆ. ಈ ಮಧ್ಯೆ ರಾಘವ್ ಚೆಡ್ಡಾ, ಸಂದೀಪ್ ಪಾಟಕ್ ಹಾಗೂ ಅಶೋಕ್ ಮಿತ್ತಲ್ ಅವರು, ದೆಹಲಿಯಲ್ಲಿ ಬಿಜೆಪಿಯ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಅವರನ್ನು ಭೇಟಿ ಮಾಡಿ, ಚರ್ಚೆ ನಡೆಸಿದರು.

<>><><*><><<>

ದೇಶ ಸೇವೆ ಮಾಡಲು ಪಕ್ಷ ನೀಡಿದ ಅವಕಾಶವನ್ನು ನಮ್ಮ ಪಕ್ಷದಿಂದ ಗೆದ್ದಿದ್ದ ರಾಜ್ಯಸಭಾ ಸದಸ್ಯರು ಕಳೆದುಕೊಂಡಿದ್ದಾರೆ ಎಂದು ಆಮ್‌ಆದ್ಮಿ ಪಕ್ಷದ ನಾಯಕ ಸಂಜಯ್ ಸಿಂಗ್ ಹೇಳಿದ್ದಾರೆ. ರಾಘವ್ ಚೆಡ್ಡಾ ಸೇರಿದಂತೆ ಹಲವರು ಪಕ್ಷದ ತೊರೆದು ಬಿಜೆಪಿ ಸೇರುತ್ತಿರುವ ಕುರಿತು ಪ್ರತಿಕ್ರಿಯೆ ನೀಡಿದ ಅವರು, ಜನತೆ ನೀಡಿದ ಜನಾದೇಶವನ್ನು ಧಿಕ್ಕರಿಸಿದ್ದಾರೆ. ಪಂಜಾಬ್‌ನಲ್ಲಿ ಭಗವಂತ್‌ಮಾನ್ ನೇತೃತ್ವದ ಸರ್ಕಾರ ಉತ್ತಮ ಆಡಳಿತ ನಡೆಸುತ್ತಿದ್ದು, ಇದನ್ನು ಸಹಿಸದೆ ಪಕ್ಷಕ್ಕೆ ಕೆಟ್ಟ ಹೆಸರು ತರಲು ಪ್ರಯತ್ನ ನಡೆಸುತ್ತಿದೆ ಎಂದು ಅವರು ಹೇಳಿದ್ದಾರೆ.

<>><><*><><<>

ಸ್ಥಳೀಯ ಅಗತ್ಯತೆಗಳಿಗೆ ಅನುಗುಣವಾಗಿ ಜಾಗತಿಕ ವ್ಯವಸ್ಥೆಯ ಬೆಳವಣಿಗೆಯಾದರೆ, ಅದು ಅರ್ಥಪೂರ್ಣ ಪ್ರಗತಿಯ ಸಂಕೇತ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಪುಣೆಯಲ್ಲಿಂದು ಎಸ್‌ಬಿಐ ಬ್ಯಾಂಕಿನ ಮಹಾರಾಷ್ಟ್ರ ಪ್ರಾದೇಶಿಕ ಕಚೇರಿಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಜಾಗತಿಕ ಮತ್ತು ಸ್ಥಳೀಯ ಅಗತ್ಯಗಳ ಈಡೇರಿಕೆಗೆ ಬ್ಯಾಂಕಿಂಗ್ ಕ್ಷೇತ್ರದ ಬೆಳವಣಿಗೆ ಅಗತ್ಯವಾಗಿದೆ. ಬ್ಯಾಂಕಿಂಗ್ ಕ್ಷೇತ್ರದಲ್ಲಿ ಡಿಜಿಟಲ್ ಆರ್ಥಿಕತೆ, ಕೃತಕಬುದ್ಧಿಮತ್ತೆ ವಲಯದಲ್ಲಿ ಪರಿವರ್ತನೆಯಾಗುತ್ತಿದ್ದು, ಇಂತಹ ಸಂದರ್ಭದಲ್ಲಿ ಗ್ರಾಹಕರೊಂದಿಗೆ ಉತ್ತಮ ಒಡನಾಟ ಹೊಂದುವುದು ಅಗತ್ಯವಾಗಿದೆ ಎಂದು ಹೇಳಿದರು.

<>><><*><><<>

ಹಳ್ಳಿಗಳ ಸಮಗ್ರ ಸುಧಾರಣೆಯಾಗದ ಹೊರತು ವಿಕಸಿತ ಭಾರತ ಪರಿಕಲ್ಪನೆ ಪರಿಪೂರ್ಣವಾಗುವುದಿಲ್ಲ ಎಂದು ಕೇಂದ್ರ ಪಂಚಾಯತ್‌ರಾಜ್ ಖಾತೆ ರಾಜ್ಯ ಸಚಿವ ಎಸ್.ಪಿ.ಸಿಂಗ್ ಬಘೇಲ್ ಹೇಳಿದ್ದಾರೆ. ರಾಷ್ಟ್ರೀಯ ಪಂಚಾಯತ್ ರಾಜ್ ದಿನದ ಹಿನ್ನೆಲೆಯಲ್ಲಿ ಮಾತನಾಡಿದ ಅವರು, ದೇಶದ ಪ್ರಗತಿಗೆ ತಳಮಟ್ಟದಲ್ಲಿ ಪ್ರಗತಿ ಅತ್ಯಂತ ಅಗತ್ಯವಾಗಿದೆ. ಸರ್ಕಾರ ಆಡಳಿತ ಸುಧಾರಣೆಗೆ ಒತ್ತು ನೀಡಿದ್ದು, ವಿವಿಧ ಯೋಜನೆಗಳನ್ನು ಗ್ರಾಮೀಣ ಜನರಿಗೆ ತಲುಪಿಸಲು ನಿರಂತರ ಪ್ರಯತ್ನ ಮಾಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

<>><><*><><<>

ಆಕಾಶವಾಣಿಯ, ಬಹುಶ್ರುತ, ಮನ್ ಕಿ ಬಾತ್ ಕಾರ್ಯಕ್ರಮದ, ೧೩೩ನೇ ಆವೃತ್ತಿ, ನಾಡಿದ್ದು ಭಾನುವಾರ ಬೆಳಗ್ಗೆ ೧೧ ಗಂಟೆಗೆ ಪ್ರಸಾರವಾಗಲಿದೆ. ಜನತೆಯ ಅನಿಸಿಕೆ, ಅಭಿಪ್ರಾಯಗಳನ್ನು ಆಧರಿಸಿದ, ಮನದ ಮಾತಿನಲ್ಲಿ, ಪ್ರಧಾನಮಂತ್ರಿ ನರೇಂದ್ರ ಮೋದಿ, ತಮ್ಮ ವಿಚಾರಗಳನ್ನು, ದೇಶ-ವಿದೇಶಗಳ ಭಾರತೀಯರೊಂದಿಗೆ, ಹಂಚಿಕೊಳ್ಳಲಿದ್ದಾರೆ. ನಮೋ ಅಪ್ಲಿಕೇಷನ್, ಮೈ ಜಿ.ಓವಿ. ಓಪನ್ ಫೋರಂ ಅಥವಾ ಉಚಿತ ಸಹಾಯವಾಣಿ ೧೮೦೦-೧೧-೭೮೦೦ ಮೂಲಕ, ಜನತೆ ತಮ್ಮ ಅಭಿಪ್ರಾಯ ಹಂಚಿಕೊಳ್ಳಲು, ಇಂದು ಕೊನೆ ದಿನ.

<>><><*><><<>

ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ವಿಶೇಷ ಸಂಪುಟ ಸಭೆಯಲ್ಲಿ ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಬಗ್ಗೆ ಮಹತ್ವದ ತೀರ್ಮಾನ ಕೈಗೊಳ್ಳಲಾಗಿದೆ. ಈ ಮೂಲಕ ಹಲವು ವರ್ಷಗಳಿಂದ ಇದ್ದ ಗೊಂದಲಕ್ಕೆ ಸರ್ಕಾರ ತೆರೆ ಎಳೆದಿದೆ. ಪರಿಶಿಷ್ಟ ಜಾತಿಗಳಿಗೆ ಲಭ್ಯವಿರುವ ಶೇಕಡ ೧೫ರಷ್ಟು ಮೀಸಲಾತಿಯಲ್ಲಿ ಪರಿಶಿಷ್ಟ ಎಡಗೈ ಸಮುದಾಯಕ್ಕೆ ಶೇಕಡ ೫.೨೫, ಬಲಗೈ ಸಮುದಾಯಕ್ಕೆ ಶೇಕಡ ೫.೨೫ ಇತರರಿಗೆ ಶೇಕಡ ೪.೫ರಷ್ಟು ಹಂಚಿಕೆ ಮಾಡಲು ನಿರ್ಧರಿಸಲಾಗಿದೆ. ಸಂಪುಟ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಈ ತೀರ್ಮಾನಕ್ಕೆ ವಿಶೇಷ ಸಂಪುಟ ಸಭೆಯಲ್ಲಿ ಸರ್ವಾನುಮತದಿಂದ ಒಪ್ಪಿಗೆ ದೊರೆತಿದೆ ಎಂದು ಸ್ಪಷ್ಟಪಡಿಸಿದ್ದಾರೆ. ನ್ಯಾಯಾಲಯ ಮುಂದಿನ ಆದೇಶದವರೆಗೆ ಇದೇ ಅನುಪಾತ ಅನ್ವಯವಾಗಲಿದ್ದು, ನೇಮಕಾತಿ ವೇಳೆ ಪ್ರವರ್ಗ ಎ-೫.೨೫, ಬಿ-೫.೨೫, ಸಿ-೪.೫ ಮೀಸಲಾತಿಯೊಂದಿಗೆ ಅಧಿಸೂಚನೆಯನ್ನು ಮತ್ತೊಮ್ಮೆ ಪ್ರಕಟಿಸಲಾಗುವುದು ಎಂದು ತಿಳಿಸಿದ್ದಾರೆ. ಬಜೆಟ್‌ನಲ್ಲಿ ಘೋಷಿಸಿರುವ ೫೬ ಸಾವಿರದ ೪೩೨ ಹುದ್ದೆಗಳ ಭರ್ತಿ ವೇಳೆ ಈ ಮೀಸಲಾತಿ ಅನ್ವಯವಾಗಲಿದೆ ಎಂದು ಹೇಳಿದ್ದಾರೆ.

<>><><*><><<>

ಗ್ರಾಮೀಣಾಭಿವೃದ್ಧಿ ಸಚಿವಾಲಯ, ೨೦೨೬-೨೭ರ ಹಣಕಾಸು ವರ್ಷಕ್ಕೆ ರಾಷ್ಟ್ರೀಯ ಮಟ್ಟದಲ್ಲಿ ಸರಸ್ ಆಜೀವಿಕ ಮೇಳಗಳ ಕ್ಯಾಲೆಂಡರ್ ಅನ್ನು ಅಂತಿಮಗೊಳಿಸಿದೆ, ಇದು ದೇಶಾದ್ಯಂತ ಗ್ರಾಮೀಣ ಜೀವನೋಪಾಯ, ಮಹಿಳಾ ಉದ್ಯಮಶೀಲತೆ ಮತ್ತು ಸಾಂಪ್ರದಾಯಿಕ ಕರಕುಶಲ ವಸ್ತುಗಳನ್ನು ಉತ್ತೇಜಿಸುವ ಗುರಿ ಹೊಂದಿದೆ. ಅನುಮೋದಿತ ವೇಳಾಪಟ್ಟಿಯ ಪ್ರಕಾರ, ದೆಹಲಿಯಲ್ಲಿ ಮೂರು ಪ್ರಮುಖ ಸರಸ್ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದು ಸಚಿವಾಲಯ ತಿಳಿಸಿದೆ. ಸರಸ್ ಆಜೀವಿಕ ಮೇಳ, ಇದೇ ಅಕ್ಟೋಬರ್ ೨೨ ರಿಂದ ನವೆಂಬರ್ ೬ ರವರೆಗೆ ಗುರುಗ್ರಾಮ್‌ನಲ್ಲಿ ನಡೆಯಲಿದೆ. ನಂತರ ನವೆಂಬರ್ ೨೧ ರಿಂದ ಡಿಸೆಂಬರ್ ೮ ರವರೆಗೆ ನವದೆಹಲಿಯ ಸುಂದರ್ ನರ್ಸರಿಯಲ್ಲಿ ಸರಸ್ ಆಹಾರ ಉತ್ಸವ ಆಯೋಜಿಸಲಾಗಿದೆ. ಸರಸ್

ಆಜೀವಿಕ ಮೇಳ-೨೦೨೭, ೨೮ ದಿನಗಳವರೆಗೆ ನಡೆಯಲಿದ್ದು, ಇದು ಮುಂದಿನ ವರ್ಷ ಫೆಬ್ರವರಿ ೧ ರಿಂದ ಫೆಬ್ರವರಿ ೨೮ ರವರೆಗೆ ನವದೆಹಲಿಯ ಮೇಜರ್ ಧ್ಯಾನ್ ಚಂದ್ ರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯಲಿದೆ ಎಂದು ಸಚಿವಾಲಯ ಮಾಹಿತಿ ನೀಡಿದೆ.

**<>><><*><><<>**

೨೦೨೬-೨೭ರ ಹಣಕಾಸು ವರ್ಷಕ್ಕೆ ರಾಜ್ಯಗಳಿಗೆ ಬಂಡವಾಳ ಹೂಡಿಕೆಗಾಗಿ ವಿಶೇಷ ನೆರವು-ಎಸ್‌ಎಎಸ್‌ಸಿಐ ಗಾಗಿ ಗಣಿ ಸಚಿವಾಲಯ, ಐದು ಸಾವಿರ ಕೋಟಿ ರೂಪಾಯಿ ನೆರವು ಒದಗಿಸಲಿದೆ.

**<>><><*><><<>**

ವಿಕಸಿತ ಭಾರತದ ದೃಷ್ಟಿಕೋನದತ್ತ ದೇಶ ಸಾಗುತ್ತಿರುವಾಗ, ಭಾರತದ ಆರ್ಥಿಕ ಬೆಳವಣಿಗೆಗೆ ಚಾಲನೆ ನೀಡುವಲ್ಲಿ ಕಡಲ ವಲಯವು ಪರಿವರ್ತನಾತ್ಮಕ ಪಾತ್ರ ವಹಿಸುತ್ತದೆ ಎಂದು ಕೇಂದ್ರ ಬಂದರು, ಹಡಗು ಮತ್ತು ಜಲಮಾರ್ಗಗಳ ಸಚಿವ ಸರ್ಬಾನಂದ ಸೋನೋವಾಲ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ಕಡಲ ಶಿಕ್ಷಣ ಕುರಿತಾದ ವಿಚಾರ ಸಂಕಿರಣ ಮತ್ತು ಒಪ್ಪಂದ ವಿನಿಮಯ ಸಮಾರಂಭದಲ್ಲಿ ಮಾತನಾಡಿದ ಸಚಿವರು, ಭಾರತದ ಕಡಲ ದೃಷ್ಟಿಕೋನವು, ಸಾಗರ್ ಮತ್ತು ಮಹಾಸಾಗರ್ ಸಿದ್ಧಾಂತಗಳಿಂದ ಮಾರ್ಗದರ್ಶಿಸಲ್ಪಟ್ಟಿದೆ, ಇದು ಪ್ರಾದೇಶಿಕ ಸಹಕಾರ, ಕಡಲ ಭದ್ರತೆ ಮತ್ತು ಹಂಚಿಕೆಯ ಸಮೃದ್ಧಿಗೆ ಸರ್ಕಾರದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ತಿಳಿಸಿದರು.

**<>><><*><><<>**

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಐಪಿಲ್ ಟಿ-೨೦ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಗುಜರಾತ್ ಟೈಟಾನ್ಸ್ ಮುಖಾಮುಖಿಯಾಗಿವೆ. ಟಾಸ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ ><><<>**